ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

**ಕರ್ನಾಟಕ ವಿಧಾನ ಪರಿಷತ್ತು**

ಸೋಮವಾರ, ದಿನಾಂಕ: 16ನೇ ಮಾರ್ಚ್, 2020

ಬೆಳಗಾವಿ ವಿಭಾಗದಲ್ಲಿರುವ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ವಸತಿನಿಲಯಗಳ ಕುರಿತು

ಶ್ರೀ ನಿರಾಣಿ ಹನುಮಂತ್ ರುದ್ರಪ್ಪ (ಪದವೀಧರರ ಕ್ಷೇತ್ರ) :-

977 (1050) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗು ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ವತಿಯಿಂದ ಬೆಳಗಾವಿ ವಿಭಾಗದಲ್ಲಿ ಒಟ್ಟು ಎಷ್ಟು ವಸತಿ ನಿಲಯಗಳು ಕಾರ್ಯನಿರ್ವಹಿಸುತ್ತಿವೆ ; (ಮೆಟ್ರಿಕ್, ಪೂರ್ವ, ಮೆಟ್ರಿಕ್ ನಂತರದ ಹಾಗೂ ಪದವಿ) ಬಾಲಕ ಮತ್ತು ಬಾಲಕಿಯರ ವಸತಿ ನಿಲಯಗಳ ಸಂಖ್ಯೆ ಎಷ್ಟು ; (ತಾಲ್ಲೂಕುವಾರು ಮಾಹಿತಿ ನೀಡುವುದು)

(ಆ) ಅವುಗಳಲ್ಲಿ ಎಷ್ಟು ವಸತಿ ನಿಲಯಗಳು ಸ್ವಂತ ಕಟ್ಟಡವನ್ನು ಹೊಂದಿರುತ್ತವೆ; ಬಾಡಿಗೆ ಕಟ್ಟಡಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ವಸತಿ ನಿಲಯಗಳೆಷ್ಟು ;

(ಇ) ಬಾಡಿಗೆ ಕಟ್ಟಡಗಳಲ್ಲಿರುವ ವಸತಿ ನಿಲಯಗಳಿಗೆ ಸ್ವಂತ ಕಟ್ಟಡಗಳನ್ನು ಒದಗಿಸುವಲ್ಲಿ ವಿಳಂಬವಾಗುತ್ತಿರುವುದಕ್ಕೆ ಕಾರಣಗಳೇನು ;

(ಈ) ಇನ್ನಾದರು ಸರ್ಕಾರ ಸ್ವಂತ ಕಟ್ಟಡ ಒದಗಿಸಲು ಅಗತ್ಯ ಕ್ರಮ ಕೈಗೊಳ್ಳುವುದೇ ? (ಸಂಪೂರ್ಣ ಮಾಹಿತಿ ನೀಡುವುದು)